# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1144 |
| ಸದಸ್ಯರ ಹೆಸರು | : | ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 22.09.2022. |
| ಉತ್ತರಿಸುವವರು | : | ಮಾನ್ಯ ಮುಖ್ಯಮಂತ್ರಿಗಳು. |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿರುವ ಒಟ್ಟು ಗ್ರಾಮ ಪಂಚಾಯಿತಿಗಳ ಸಂಖ್ಯೆ ಎಷ್ಟು; | ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿರುವ ಒಟ್ಟು ಗ್ರಾಮ ಪಂಚಾಯಿತಿಗಳ ಸಂಖ್ಯೆ:1137. |
| (ಆ) | ಈ ಭಾಗದ ಜಿಲ್ಲೆಗಳಲ್ಲಿ ಖಾಲಿಯಿರುವ ಮತ್ತು ಭರ್ತಿ ಮಾಡಿಕೊಳ್ಳಬಹುದಾದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮತ್ತು ಗ್ರಾಮ ಪಂಚಾಯಿತಿ ಕಾರ್ಯದರ್ಶಿ 1, 2 ಹುದ್ದೆಗಳ ಸಂಖ್ಯೆ ಎಷ್ಟು; ಯಾವ ಕಾಲಮಿತಿಯಲ್ಲಿ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲಾಗುತ್ತದೆ; | ಖಾಲಿಯಿರುವ ಮತ್ತು ಭರ್ತಿ ಮಾಡಿಕೊಳ್ಳಬಹುದಾದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳ ಸಂಖ್ಯೆ:228 ಮತ್ತು ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-1 ಹುದ್ದೆಗಳ ಸಂಖ್ಯೆ:167 ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-2 ಹುದ್ದೆಗಳ ಸಂಖ್ಯೆ:211.<br><br>ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೃಂದಕ್ಕೆ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ನೇಮಕಾತಿ ಪ್ರಾಧಿಕಾರ ಆಗಿದ್ದು ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-1 ವೃಂದದ ಅರ್ಹ ನೌಕರರು ಲಭ್ಯವಾದಂತೆ ಜೇಷ್ಠತೆ ಮತ್ತು ಅರ್ಹತೆ ಆಧಾರದ ಮೇಲೆ ಮುಂಬಡ್ತಿ ಮೂಲಕ ಭರ್ತಿ ಮಾಡಲು ನಿರ್ದೇಶನ ನೀಡಲಾಗಿದೆ.<br><br>ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-1 ಮತ್ತು ಗ್ರೇಡ್-2 ವೃಂದಕ್ಕೆ ಜಿಲ್ಲಾ ಪಂಚಾಯಿತಿಗಳ ಉಪ ಕಾರ್ಯದರ್ಶಿ (ಅಭಿವೃದ್ಧಿ) ರವರು ನೇಮಕಾತಿ ಪ್ರಾಧಿಕಾರ ಆಗಿದ್ದು ಭರ್ತಿ ಮಾಡಲು ಸರ್ಕಾರದಿಂದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ. |
| (ಇ) | ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಹುದ್ದೆಗಳು ಖಾಲಿಯಿದ್ದಲ್ಲಿ ಆಡಳಿತಕ್ಕೆ ಮತ್ತು ಜನಸಾಮಾನ್ಯರಿಗೆ ಅಡಚಣೆಯುಂಟಾಗುವುದಿಲ್ಲವೇ; ಈ ಬಗ್ಗೆ ಸರ್ಕಾರ ಸೂಕ್ತ ಕ್ರಮ ಕೈಗೊಳ್ಳುವುದೇ? (ಮಾಹಿತಿ ನೀಡುವುದು) | ಹೌದು.<br><br>ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಹುದ್ದೆ ನಿವೃತ್ತಿ, ಅಮಾನತ್ತು, ಇನ್ನಿತರೆ ಕಾರಣಗಳಿಂದ ತೆರವಾದಲ್ಲಿ ಆ ಗ್ರಾಮ ಪಂಚಾಯತಿಯಲ್ಲಿ ಗ್ರೇಡ್-1 ಗ್ರಾಮ ಪಂಚಾಯತಿ ಕಾರ್ಯದರ್ಶಿಯು ಪೂರ್ಣಕಾಲಿಕವಾಗಿ ಕಾರ್ಯನಿರ್ವಹಿಸುತ್ತಿದ್ದಲ್ಲಿ ಪ್ರಭಾರದಲ್ಲಿರಿಸುವುದು. ಗ್ರೇಡ್-1 ಗ್ರಾಮ ಪಂಚಾಯತಿ ಕಾರ್ಯದರ್ಶಿಯು ಇಲ್ಲದಿದ್ದಲ್ಲಿ ನೆರೆಯ ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗೆ ಹೆಚ್ಚುವರಿ ಪ್ರಭಾರ ವಹಿಸಲು ಸರ್ಕಾರದಿಂದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ. |

ಸಂಖ್ಯೆ: ಗ್ರಾಅಪ 307 ಗ್ರಾಪಂಅ 2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ